**<u>ಸಿವಿಲ್ ನ್ಯಾಯಾಧೀಶರು ಮತ್ತು ಪ್ರ ದ ನ್ಯಾದಂ. ರವರ ನ್ಯಾಯಾಲಯ,</u>**

**<u>ಪೊನ್ನಂಪೇಟೆ</u>**

**ಸಿ.ಸಿ. ನಂ. 592/2025 ಫ್ರಾ.ಸಾ -3**

**ಚಾ.ಸಾ – 3**

**<u>ದಿನಾಂಕಃ 16.06.2026. ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.</u>**

| | | |
|---|---|---|
| ಸಾಕ್ಷಿಯ ಹೆಸರು | : | ಲಲಿತಾ |
| ಗಂಡನ ಹೆಸರು | : | ಮೋಹನ |
| ವಯಸ್ಸು | : | 48 ವರ್ಷ |
| ಉದ್ಯೋಗ | : | ಗೃಹಿಣಿ |
| ವಾಸ ಸ್ಥಳ | : | ಚೆನ್ನಂಗೊಲ್ಲಿ ಗ್ರಾಮ |

**<u>ಮುಖ್ಯ ವಿಚಾರಣೆ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ-</u>**

ಆರೋಪಿ ನನ್ನ ಮಗ. ಚಾಸಾ 1 ಮತ್ತು 2 ನನ್ನ ಮಗಳು ಮತ್ತು ನನ್ನ ಗಂಡ. ನನ್ನ ಗಂಡನ ಜೊತೆ ಜಗಳ ಆಗಿಲ್ಲ, ನನ್ನ ಮಗ ನನ್ನ ಗಂಡನಿಗೆ ಮಂಡೆ ಕತ್ತಿಯಿಂದ ಹಲ್ಲೆ ಮಾಡಿಲ್ಲ, ನನ್ನ ಗಂಡ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದಿಲ್ಲ. ನಾನು ಪೊಲೀಸರಿಗೆ ಹೇಳಿಕೆ ಕೊಟ್ಟಿಲ್ಲ. ಸಾಕ್ಷಿಯು ನ್ಯಾಯಾಲಯದ ಮುಂದೆ ಇರುವ ಕತ್ತಿಯನ್ನು ನೋಡಿ ಗುರುತಿಸಿರುವುದಿಲ್ಲ.

**(ಈ ಹಂತದಲ್ಲಿ ಸಾಕ್ಷಿಯು ತನ್ನ ಹೇಳಿಕೆಗೆ ಪ್ರತಿಕೂಲವಾಗಿ ಸಾಕ್ಷ್ಯ ನುಡಿಯುತ್ತಿರುವುದರಿಂದ, ಮಾನ್ಯ ಎಪಿಪಿರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ, ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ನೀಡಲಾಯಿತು)**

**<u>ಪಾಟೀ ಸವಾಲುಃ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದಃ-</u>**

ದಿ. 01.03.2025 ರಂದು ಸಂಜೆ 04.30 ಕ್ಕೆ ನಾನು ನಮ್ಮ ವಾಸದ ಮನೆಯಲ್ಲಿದ್ದಾಗ ಚಾಸಾ 2 ನನ್ನ ಗಂಡ ನನ್ನ ಜೊತೆ ಮದ್ಯಪಾನ ಮಾಡಿ ಸಣ್ಣಪುಟ್ಟ ಗಲಾಟೆ ಮಾಡುತ್ತಿದ್ದ ಎಂದರೆ ಸರಿಯಲ್ಲ. ಆ ಸಮಯದದಲ್ಲಿ ನನ್ನ ಮಗಳು ಚಾಸಾ 1 ರವರು ರೂಮ್ ನಲ್ಲಿದ್ದು ನನ್ನ ಮಗ ಮನೆಯ ಮುಂದೆ ಸೌದೆ ಕಡಿಯುತ್ತಿದ್ದ ಎಂದರೆ ಸರಿಯಲ್ಲ. ಗಲಾಟೆ ಶಬ್ದ ಕೇಳಿ ನನ್ನ ಮಗ ಆರೋಪಿ ಮನೆಯ ಒಳಗಡೆ ಬಂದು ನ್ಯಾಯಾಲಯದ ಮುಂದೆ

ಇರುವ ಮಂಡೆ ಕತ್ತಿಯಿಂದ ನನ್ನ ಗಂಡನ ಎಡ ಕೈ ತೋಳಿನ ಭಾಗಕ್ಕೆ ಎದೆಯ ಭಾಗಕ್ಕೆ ಮತ್ತು ಹೊಟ್ಟೆಯ ಭಾಗಕ್ಕೆ ಹಲ್ಲೆ ಮಾಡಿ ತೀವ್ರ ಸ್ವರೂಪದ ಗಾಯ ಪಡಿಸಿದ ಎಂದರೆ ಸರಿಯಲ್ಲ. ನಂತರ ಮಗಳು ನನ್ನ ಗಂಡನನ್ನು ಆಂಬ್ಯುಲೆನ್ಸ್ ನಲ್ಲಿ ಲೋಪ ಮುದ್ರಾ ಆಸ್ಪತ್ರೆಗೆ ಕರೆದುಕೊಂಡು ಹೋಗಿ ಚಿಕಿತ್ಸೆಗೆ ದಾಖಲಿಸಿದರು ಎಂದರೆ ಸರಿಯಲ್ಲ. ನನ್ನ ಗಂಡ ಪ್ರಜ್ಞೆ ತಪ್ಪಿ ಮಾತನಾಡುವ ಸ್ಥಿತಿಯಲ್ಲಿರಲಿಲ್ಲ ಎಂದರೆ ಸರಿಯಲ್ಲ. ನನ್ನ ಗಂಡನನ್ನು ಹೆಚ್ಚಿನ ಚಿಕಿತ್ಸೆಗೆ ಮಡಿಕೇರಿಯ ಜಿಲ್ಲಾ ಆಸ್ಪತ್ರೆಗೆ ದಾಖಲಿಸಿದೆವು ಎಂದರೆ ಸರಿಯಲ್ಲ. ನಂತರ ನನ್ನ ಮಗಳು ಗೋಣಿಕೊಪ್ಪ ಪೊ. ಠಾಣೆಗೆ ಹೋಗಿ ದೂರು ದಾಖಲಿಸಿದ ವಿಚಾರ ತಿಳಿಯಿತು ಎಂದರೆ ಸರಿಯಲ್ಲ. ಈ ಬಗ್ಗೆ ಪೊಲೀಸರಿಗೆ ಹೇಳಿಕೆ ಕೊಟ್ಟಿದ್ದೇನೆ ಎಂದರೆ ಸರಿಯಲ್ಲ.

ಮೇಲೆ ಹೇಳಿದಂತೆ ಪೊಲೀಸರಿಗೆ ಹೇಳಿಕೆ ಕೊಟ್ಟಿದ್ದು ಆ ಹೇಳಿಕೆಯನ್ನು ಓದಿ ಹೇಳಿದ್ದು, ಅದನ್ನು ಅಲ್ಲಗೆಳೆದ ಕಾರಣ ಅದನ್ನು ನಿ. ಪಿ. 4 ಎಂದು ಗುರುತಿಸಲಾಯಿತು. ಆರೋಪಿ ನನ್ನ ಮಗನಾದ ಕಾರಣ ಅವರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿ ಪರ ಶ್ರೀ. ವಿ. ಜಿ. ಎಂ. ವಕೀಲರಿಂದಃ** ಆರೋಪಿ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ತಿಳಿಸಿರುತ್ತಾರೆ.

**ಮರು ವಿಚಾರಣೆಃ ಇಲ್ಲ.**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಬೆರಳಚ್ಚಿಸಿದೆ)**

**Sd/-**

ಸಿವಿಲ್ ನ್ಯಾಯಾಧೀಶರು

ಮತ್ತು ಪ್ರದನ್ಯಾದಂ., ಪೊನ್ನಂಪೇಟೆ